ಕರ್ನಾಟಕ ಸರ್ಕಾರ

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಇ : ಉ ನಿ : ಸುಮಪ : 2016-17 ದಿನಾಂಕ: 10-08-2016

# ಪತ್ರಿಕಾ ಆಮಂತ್ರಣ

| ಕ್ರಮ ಸಂಖ್ಯೆ | ಕಾರ್ಯಕ್ರಮಗಳ ವಿವರ | ದಿನಾಂಕ / ಸಮಯ | ಕಾರ್ಯಕ್ರಮ ನಡೆಯುವ ಸ್ಥಳ |
|---|---|---|---|
| 1. | ಕರ್ನಾಟಕದಲ್ಲಿ ತಂಬಾಕು ಬಳಕೆ ಮತ್ತು ಮಕ್ಕಳ ಮೇಲೆ ಅದರ ದುಷ್ಪಾರಿಣಾಮ ಕುರಿತ ಪುಸ್ತಕಗಳ ಬಿಡುಗಡೆ:<br><br>ಬಿಡುಗಡೆ:<br><br>ಕೆ.ಆರ್. ರಮೇಶ್‌ಕುಮಾರ್,<br>ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು.<br><br>ಮುಖ್ಯ ಅತಿಥಿಗಳು:<br><br>ನ್ಯಾಯಮೂರ್ತಿ ಎಂ.ಎನ್. ವೆಂಕಟಾಚಲಯ್ಯ,<br>ಸರ್ವೋಚ್ಚ ನ್ಯಾಯಾಲಯದ ನಿವೃತ್ತ ನ್ಯಾಯಮೂರ್ತಿಗಳು. | 11-08-2016<br>ಗುರುವಾರ<br>ಬೆಳಿಗ್ಗೆ<br>10-00 ಗಂಟೆಗೆ | ಕೊಠಡಿ ಸಂಖ್ಯೆ 419,<br>ನಾಲ್ಕನೇ ಮಹಡಿ,<br>ವಿಕಾಸಸೌಧ,<br>ಬೆಂಗಳೂರು |

ನಿರ್ದೇಶಕರ ಪರವಾಗಿ

## ಪತ್ರಿಕಾ ಪ್ರಕಟಣೆ

# ವಿಕಲಚೇತನರ ಕಲ್ಯಾಣಕ್ಕಾಗಿ ರಾಷ್ಟ್ರಪ್ರಶಸ್ತಿ : ಅರ್ಜಿ ಆಹ್ವಾನ

ಬೆಂಗಳೂರು, ಆಗಸ್ಟ್ 10 (ಕರ್ನಾಟಕ ವಾರ್ತೆ)

2016-17 ನೇ ಸಾಲಿನಲ್ಲಿ ವಿಕಲಚೇತನರ ಕಲ್ಯಾಣಕ್ಕಾಗಿ ವಿಶೇಷ ಸೇವೆ ಸಲ್ಲಿಸಿದವರಿಗಾಗಿ ರಾಷ್ಟ್ರ ಪ್ರಶಸ್ತಿ ನೀಡಿಕೆಗೆ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಅರ್ಜಿ ನಮೂನೆಗಳನ್ನು ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ, ನೆಲಮಹಡಿ, ಪೋಡಿಯಂ ಬ್ಲಾಕ್, ವಿ.ವಿ. ಕೇಂದ್ರ, ಡಾ. ಅಂಬೇಡ್ಕರ್ ವೀಧಿ, ಬೆಂಗಳೂರು – 560 001 ಅಥವಾ ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಯವರು, ಉಪ ನಿರ್ದೇಶಕರ ಕಚೇರಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆರವರ ಕಚೇರಿಯಿಂದ ಅಥವಾ http://welfareofdisabled.nic.in ವೆಬ್‌ಸೈಟ್‌ನಿಂದ ಅರ್ಜಿಗಳನ್ನು ಪಡೆಯಬಹುದು. ಸಂಪೂರ್ಣ ಮಾಹಿತಿಯೊಂದಿಗೆ ಭರ್ತಿಮಾಡಿದ ಅರ್ಜಿಗಳನ್ನು ಸಂಬಂಧಿಸಿದ ಜಿಲ್ಲೆಯ ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿ, ಉಪ ನಿರ್ದೇಶಕರ ಕಚೇರಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖಾ ಕಚೇರಿಗೆ ಸಲ್ಲಿಸತಕ್ಕದ್ದು. ಅರ್ಜಿಗಳನ್ನು ಸಲ್ಲಿಸಲು ಆಗಸ್ಟ್ 30 ಕೊನೆಯ ದಿನವಾಗಿರುತ್ತದೆ.

ಬಾಬು:ಜಿಪಿಆರ್.

## ಹಿರಿಯ ನಾಗರಿಕರ ಕಲ್ಯಾಣಕ್ಕಾಗಿ ರಾಷ್ಟ್ರಪ್ರಶಸ್ತಿ : ಅರ್ಜಿ ಆಹ್ವಾನ

ಬೆಂಗಳೂರು, ಆಗಸ್ಟ್ 10 (ಕರ್ನಾಟಕ ವಾರ್ತೆ)

ಹಿರಿಯ ನಾಗರಿಕರ ಕ್ಷೇತ್ರದಲ್ಲಿ ಅತ್ಯುತ್ತಮ ಸೇವೆ ಸಲ್ಲಿಸಿದ ವ್ಯಕ್ತಿ ಹಾಗು ಸಂಸ್ಥೆಗಳಲ್ಲಿ ಸೇವೆ ಸಲ್ಲಿಸಿರುವ/ಸಲ್ಲಿಸುತ್ತಿರುವ ವ್ಯಕ್ತಿಗಳಿಗೆ ರಾಜ್ಯ ಪ್ರಶಸ್ತಿಗಳನ್ನು ಸರ್ಕಾರವು ನೀಡುತ್ತಾ ಬಂದಿದ್ದು, ಪ್ರತಿ ವರ್ಷದಂತೆ ಈ ಸಾಲಿನ 2016–2017 ನೇ ಸಾಲಿನಲ್ಲಿಯೂ ರಾಜ್ಯ ಪ್ರಶಸ್ತಿಗಾಗಿ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಅರ್ಜಿ ನಮೂನೆಗಳನ್ನು ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳಿಂದ ಅಥವಾ ಇಲಾಖೆ ವೆಬ್‌ಸೈಟ್ http://welfareofdisabled.nic.in ನಿಂದ ಪಡೆಯಬಹುದಾಗಿದೆ.

ಅರ್ಜಿಗಳನ್ನು ಸಲ್ಲಿಸಲು ಆಗಸ್ಟ್ 16 ಕೊನೆಯ ದಿನವಾಗಿರುತ್ತದೆ.

.

ಬಾಬು:ಜಿಪಿಆರ್.

## ಮಾಧ್ಯಮಗಳಲ್ಲಿ ಕೃಷಿ ಕಾರ್ಯಗಾರ

ಬೆಂಗಳೂರು, ಆಗಸ್ಟ್ 10 (ಕರ್ನಾಟಕ ವಾರ್ತೆ)

ನೂತನ ತಾಂತ್ರಿಕತೆಗಳನ್ನು ಸಂಗ್ರಹಿಸಿ ಒಗ್ಗೂಡಿಸಿ, ಪರೀಕ್ಷಿಸಿ ಅರ್ಥವಾಗುವಂತೆ ತಿಳಿಸಿ ಅಳವಡಿಸಿಕೊಳ್ಳುವಂತೆ ಮಾಡುವುದು ಅತ್ಯಂತ ಅವಶ್ಯಕವಾಗಿದೆ. ರೈತರು ಯಾವ ಮಾಹಿತಿಯನ್ನು ಯಾವ ರೂಪದಲ್ಲಿ ಬಯಸುತ್ತಾರೆ ಎಂದು ಅರಿತುಕೊಳ್ಳುವುದು ಬಹುಮುಖ್ಯ.

ವಿದ್ಯುನ್ಮಾನ ಮಾದ್ಯಮಗಳು ಮತ್ತು ದಿನಪತ್ರಿಕೆಗಳು ಯಾವ ರಿತಿಯ ಮಾಹಿತಿಯನ್ನು ಅಪೇಕ್ಷಿಸುತ್ತವೆ ಹಾಗೂ ಯಾವ ರೀತಿ ಪ್ರಸಾರ ಮಾಡಿದರೆ ಕೃಷಿಯಲ್ಲಿ ಶೀಘ್ರ ಪ್ರಗತಿ ಸಾಧಿಸಿ,

ಕೃಷಿಯನ್ನು ಲಾಭದಾಯಕ ಉದ್ಯಮವಾಗಿ ರೂಪಿಸಲು ಸಾಧ್ಯ ಎಂಬ ನಿಟ್ಟಿನಲ್ಲಿ ರೈತರು-ವಿಜ್ಞಾನಿಗಳು-ಅಧಿಕಾರಿಗಳು-ವಿಸ್ತರಣಾ ಕಾರ್ಯಕರ್ತರು - ಮಾಧ್ಯಮದವರು ಒಂದೆಡೆ ಸೇರಿ ಚಿಂತನ ಮಂಥನ ಮಾಡಲು ಕಾರ್ಯಾಗಾರ ಏರ್ಪಡಿಸಲಾಗಿದೆ.

ಈ ನಿಟ್ಟಿನಲ್ಲಿ ಕೃಷಿ ವಿಶ್ವ ವಿದ್ಯಾನಿಲಯ,. ಬೆಂಗಳೂರು ಮತ್ತು ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ಬೆಂಗಳೂರು ಇವರ ಸಂಯುಕ್ತ ಆಶ್ರಯದಲ್ಲಿ "ಮಾಧ್ಯಮಗಳಲ್ಲಿ ಕೃಷಿ" ಎಂಬ ವಿಷಯದ ಬಗ್ಗೆ ಒಂದು ದಿನದ ಕಾರ್ಯಾಗಾರವನ್ನು ಕೃಷಿ ವಿಶ್ವವಿದ್ಯಾನಿಲಯ, ಬೆಂಗಳೂರಿನ ಗಾಂಧಿ ಕೃಷಿ ವಿಜ್ಞಾನ ಕೇಂದ್ರದ (ಜಿಕೆವಿಕೆ) ಆವರಣದಲ್ಲಿ ಸೆಪ್ಟೆಂಬರ್ 2 ರಂದು ಹಮ್ಮಿಕೊಂಡಿದೆ.

ಈ ಕಾರ್ಯಾಗಾರದಲ್ಲಿ ಭಾಗವಹಿಸಲು ಇಚ್ಛಿಸುವ ಕೃಷಿ ಚಿಂತಕರು, ಕೃಷಿ ಲೇಖಕರು, ಪ್ರಗತಿ ಪರ ರೈತರು ಮತ್ತು ಸಾರ್ವಜನಿಕರು ಆಗಸ್ಟ್ 20 ರೊಳಗಾಗಿ ಹಿರಿಯ ವಾರ್ತಾತಜ್ಞರು, ವಿಸ್ತರಣಾ ನಿರ್ದೇಶನಾಲಯ, ಕೃಷಿ ವಿಶ್ವವಿದ್ಯಾನಿಲಯ, ಹೆಬ್ಬಾಳ, ಬೆಂಗಳೂರು, ದೂರವಾಣಿ: 080-41883, ಮೊ: 9972035456,ಇಮೇಲ್ ವಿಳಾಸ: sisuasb@gmail.com ಕ್ಕೆ ಸಂಪರ್ಕಿಸಲು ಕೋರಿದೆ.

ಬಾಬು:ಜಿಪಿಆರ್.

# ಗ್ರಂಥಾಲಯ ದುರಸ್ತಿ

ಬೆಂಗಳೂರು, ಆಗಸ್ಟ್ 10 (ಕರ್ನಾಟಕ ವಾರ್ತೆ)

ನಗರ ಕೇಂದ್ರ ಗ್ರಂಥಾಲಯ, ಉತ್ತರವಲಯ, ಮಲ್ಲೇಶ್ವರಂ ಶಾಖಾ ಗ್ರಂಥಾಲಯ ಕಟ್ಟಡವು 1976 ರಲ್ಲಿ ನಿರ್ಮಾಣಗೊಂಡಿದ್ದು, ಹಳೆಯ ಕಟ್ಟಡವಾಗಿದ್ದು, ವಿದ್ಯುತ್ ವೈರಿಂಗ್ ದುರಸ್ಥಿ ಹಾಗೂ ನವೀಕರಣ ಕಾರ್ಯವನ್ನು ಸಾರ್ವಜನಿಕ ಹಿತದೃಷ್ಟಿಯ ಮೇರೆಗೆ ಕೈಗೆತ್ತಿಕೊಳ್ಳಲಾಗಿದೆ. ಕಾಮಗಾರಿಗಳು ಅಂತಿಮಗೊಂಡ ಕೂಡಲೇ ಗ್ರಂಥಾಲಯ ಸೇವೆಯನ್ನು ಸಾರ್ವಜನಿಕ ಓದುಗರಿಗೆ ಪ್ರಾರಂಭಿಸಲಾಗುವುದು. ಸಾರ್ವಜನಿಕ ಓದುಗರು ಸಹಕರಿಸಬೇಕಾಗಿ ಕೋರಿದೆ.

ಬಾಬು:ಜಿಪಿಆರ್.

# ಹಿರಿಯ/ಯುವ ಕಲಾವಿದರ ಪರಿಚಯಾತ್ಮಕ ಪುಸ್ತಕ

ಬೆಂಗಳೂರು, ಆಗಸ್ಟ್ 10 (ಕರ್ನಾಟಕ ವಾರ್ತೆ)

ಕರ್ನಾಟಕ ಸಂಗೀತ ನೃತ್ಯ ಅಕಾಡೆಮಿಯ ವ್ಯಾಪ್ತಿಗೆ ಒಳಪಡುವ ಶಾಸ್ತ್ರೀಯ ಕರ್ನಾಟಕ ಸಂಗೀತ, ಶಾಸ್ತ್ರೀಯ ಹಿಂದೂಸ್ತಾನಿ ಸಂಗೀತ, ಸುಗಮ ಸಂಗೀತ, ನೃತ್ಯ, ಕಥಾಕೀರ್ತನ ಮತ್ತು ಗಮಕ ಕಲಾಪ್ರಕಾರಗಳಿಗೆ ಸಂಬಂಧಿಸಿದಂತೆ,ಹಿರಿಯ ಹಾಗೂ ಯುವ ಕಲಾವಿದರ

ಪರಿಚಯಾತ್ಮಕ ಪುಸ್ತಕ ಹೊರತರಲು ನಿರ್ಧರಿಸಿದೆ. ಇದಕ್ಕೆ ಸಂಬಂಧಿಸಿದಂತೆ, ಹಿರಿಯ ಹಾಗೂ ಯುವ ಕಲಾವಿದರಿಂದ ಅರ್ಜಿಗಳನ್ನು ಆಹ್ವಾನಿಸಿದೆ.

ಅಕಾಡೆಮಿ ವ್ಯಾಪ್ತಿಗೆ ಒಳಪಡುವ ಕಲಾಪ್ರಕಾರಗಳಿಗೆ ಸಂಬಂಧಿಸಿದಂತೆ ಹಿರಿಯ ಹಾಗೂ ಯುವ ಕಲಾವಿದರು ತಮ್ಮ ಸಂಕ್ಷಿಪ್ತ ಪರಿಚಯದೊಂದಿಗೆ ಇತ್ತೀಚಿನ ಪಾಸ್‌ಪೋರ್ಟ್ ಅಳತೆಯ ಭಾವಚಿತ್ರವನ್ನು ಆಗಸ್ಟ್ 25 ರೊಳಗಾಗಿ ರಿಜಿಸ್ಟ್ರಾರ್, ಕರ್ನಾಟಕ ಸಂಗೀತ ನೃತ್ಯ ಅಕಾಡೆಮಿ, ಕನ್ನಡ ಭವನ, 2ನೇ ಮಹಡಿ, ಜೆ.ಸಿ. ರಸ್ತೆ, ಬೆಂಗಳೂರು – 2 ಇಲ್ಲಿಗೆ ಕಳುಹಿಸಿಕೊಡಲು ಕೋರಿದೆ.

ಬಾಬು:ಜಿಪಿಆರ್.